ವೈದ್ಯರ ಕೊರತೆ

582 (500) ಶ್ರೀ ರುದ್ರೇಶಗೌಡ. ವೈ.ಎನ್. (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅರಸೀಕೆರೆ ತಾಲ್ಲೂಕಿನ ನೇರ್ಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಉಂಡಿಗನಾಳು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ವೈದ್ಯರ ನೇಮಕಾತಿ ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು);

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅರಸೀಕೆರೆ ತಾಲ್ಲೂಕಿನ ನೇರ್ಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 1 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆ ಮಂಜೂರಾಗಿದ್ದು, ಆ ಹುದ್ದೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಉಂಡಿಗನಾಳು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 1 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆ ಮಂಜೂರಾಗಿದ್ದು, ಸದರಿ ಹುದ್ದೆ ಖಾಲಿ ಇರುತ್ತದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಉಂಡಿಗನಾಳು ಇಲ್ಲಿ ಖಾಲಿ ಇದ್ದು, ಸದರಿ ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಪ್ರಥಮ ದರ್ಜೆ ಕಾಲೇಜಿಗೆ ಮೂಲಭೂತ ಸೌಲಭ್ಯ

583 (501) ಶ್ರೀ ರುದ್ರೇಶ್ ಗೌಡ. ವೈ.ಎನ್. (ಬೇಲೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೇಲೂರು ತಾಲ್ಲೂಕು ಹಳೇಬೀಡು ಗ್ರಾಮಕ್ಕೆ ಮಂಜೂರಾ ಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಷ್ಟು ಕೊಠಡಿಗಳಿವೆ; ಈ